## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 380 |
| ಮಾನ್ಯ ಸದಸ್ಯರ ಹೆಸರು | ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 29.01.2026 |
| ಉತ್ತರಿಸುವ ಸಚಿವರು | ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನ್ಯಾಯಾಲಯ ಕಟ್ಟಡವನ್ನು ನಿರ್ಮಾಣ ಮಾಡಬೇಕೆಂಬ ಅನೇಕ ಬೇಡಿಕೆಗಳು ಇದ್ದು, ಬೆಳ್ತಂಗಡಿ, ಪುತ್ತೂರು, ಬಂಟ್ವಾಳ ಮತ್ತು ಮಂಗಳೂರಿನಲ್ಲಿ ನ್ಯಾಯಾಲಯ ಕಟ್ಟಡ ಒದಗಿಸಲು ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು; ಯಾವಾಗ ಪ್ರಾರಂಭಗೊಳ್ಳುವುದು; ಯಾವ ಹಂತದಲ್ಲಿದೆ; | ಲೋಕೋಪಯೋಗಿ ಇಲಾಖೆ ಯಿಂದ ಉಡುಪಿ ಜಿಲ್ಲಾ ವ್ಯಾಪ್ತಿಯಲ್ಲಿ 2022-23ನೇ ಸಾಲಿನಲ್ಲಿ ರೂ.15.14 ಕೋಟಿ ಮೊತ್ತಕ್ಕೆ ಉಡುಪಿ ನ್ಯಾಯಾಲಯ ಕಟ್ಟಡದ ಆವರಣದಲ್ಲಿ ವಕೀಲರ ಭವನ ಮತ್ತು ಎ.ಡಿ.ಆರ್ ಸಂಕೀರ್ಣವನ್ನೊಳಗೊಂಡ ಅನೆಕ್ಸ್ ನ್ಯಾಯಾಲಯ ಕಟ್ಟಡ ನಿರ್ಮಾಣ ಕಾಮಗಾರಿ ಅನುಮೋದನೆಗೊಂಡಿದ್ದು, ಕಾಮಗಾರಿ ಪ್ರಗತಿಯಲ್ಲಿದೆ ಮತ್ತು ಕುಂದಾಪುರದಲ್ಲಿರುವ ಅನೆಕ್ಸ್ ಕೋರ್ಟ್ ಕಟ್ಟಡ ಮತ್ತು ಬಾರ್ ಅಸೋಸಿಯೇಷನ್‌ಗೆ 2 ನೇ ಮಹಡಿಯಲ್ಲಿ ಗಾಲ್ವಾಲ್ಯೂಮ್ ಶೀಟ್ ರೂಫಿಂಗ್, ಗ್ರಾನೈಟ್ ವಾಲ್ ಕ್ಲಾಡಿಂಗ್ ಮತ್ತು ಪೀಠೋಪಕರಣಗಳನ್ನು ಒದಗಿಸುವುದು ಮತ್ತು ಗ್ರಿಡ್ ಸಂಪರ್ಕಿತ ಸೌರಶಕ್ತಿಯನ್ನು ಒದಗಿಸುವ ಕಾಮಗಾರಿ ರೂ.2.00 ಕೋಟಿ ಮೊತ್ತಕ್ಕೆ ಅನುಮೋದನೆಗೊಂಡಿದ್ದು, ಟೆಂಡರ್ ಹಂತದಲ್ಲಿದೆ.<br><br>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನ್ಯಾಯಾಲಯ ಕಟ್ಟಡವನ್ನು ನಿರ್ಮಾಣ ಮಾಡಲು ಬೆಳ್ತಂಗಡಿ, ಪುತ್ತೂರು ಮತ್ತು ಮಂಗಳೂರಿನ ನ್ಯಾಯಾಲಯ ಕಟ್ಟಡಕ್ಕೆ ಲೋಕೋಪಯೋಗಿ ಇಲಾಖೆಯಿಂದ ಬಿಡುಗಡೆ ಮಾಡಿದ ಅನುದಾನದ ವಿವರವನ್ನು ಅನುಬಂಧ-1 ರಲ್ಲಿ ಒದಗಿಸಿದೆ. ಹಾಗೂ ಬಂಟ್ವಾಳ ತಾಲೂಕಿನಲ್ಲಿ ನ್ಯಾಯಾಲಯ ನಿರ್ಮಾಣ ಮಾಡಲು ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ. |



e No. LAW-LCE/22/2026-ADMN1-LAW SEC-Part(1) (Computer No. 2115946)
nerated from eOffice by H K PATIL, MIN-LAW(HKP), MINISTER, MINISTER - LAW on 18/03/2026 12:56 PM

| | | |
|---|---|---|
| ಆ) | ಹೊಸದಾಗಿ ಪ್ರಾರಂಭಗೊಂಡ ತಾಲ್ಲೂಕುಗಳಾದ ಕಡಬ, ಮುಲ್ಕಿ ಮತ್ತು ಉಳ್ಳಾಲದಲ್ಲಿ ನ್ಯಾಯಾಲಯ ಪ್ರಾರಂಭಿಸಬೇಕೆಂಬ ಜನರ ಬೇಡಿಕೆಯನ್ನು ಈಡೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವಾಗ ಪ್ರಾರಂಭಿಸಲಾಗವುದು; (ವಿವರ ನೀಡುವುದು); | ಹೊಸದಾಗಿ ರಚಿಸಲಾದ 38 ತಾಲ್ಲೂಕುಗಳಲ್ಲಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯವನ್ನು ಸ್ಥಾಪಿಸಲು ಕರ್ನಾಟಕ ಉಚ್ಚ ನ್ಯಾಯಾಲಯದಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕು ಸಹ ಒಳಗೊಂಡಿರುತ್ತದೆ.<br><br>ಮುಂದುವರೆದು, ಕೆಲವು ಜಿಲ್ಲೆಗಳಲ್ಲಿ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ಬಾಕಿ ಇರುವುದರಿಂದ, ಸರ್ಕಾರವು ಆದ್ಯತೆಯ ಆಧಾರದ ಮೇಲೆ ಮಂಜೂರು ಮಾಡಬೇಕಾದ 19 ನ್ಯಾಯಾಲಯಗಳ ಪರಿಷ್ಕೃತ ಪಟ್ಟಿಯನ್ನು ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ ಇವರು ದಿನಾಂಕ:13.11.2025 ರ ಪತ್ರದಲ್ಲಿ ಒದಗಿಸಿದ್ದು, ಸದರಿ ಆದ್ಯತಾ ಪಟ್ಟಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕಿನಲ್ಲಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಸ್ಥಾಪಿಸುವ ಪ್ರಸ್ತಾವನೆ ಒಳಗೊಂಡಿರುವುದಿಲ್ಲ. ಅದರಂತೆ, ಮೊದಲ ಹಂತದಲ್ಲಿ ಆದ್ಯತೆಯ ಆಧಾರದ ಮೇಲೆ 19 ನ್ಯಾಯಾಲಯಗಳಿಗೆ ಮಂಜೂರಾತಿ ನೀಡಿ, ನಂತರ ರಾಜ್ಯದಲ್ಲಿ ಉಳಿದ ನ್ಯಾಯಾಲಯಗಳ ಸ್ಥಾಪನೆ ಅನುಮತಿ ನೀಡುವಂತೆ ಆರ್ಥಿಕ ಇಲಾಖೆಗೆ ಕಡತ ಸಲ್ಲಿಸಲಾಗಿದ್ದು, ಪ್ರಸ್ತುತ ಕಡತವು ಸದರಿ ಇಲಾಖೆಯ ಪರಿಶೀಲನೆಯಲ್ಲಿದೆ.<br><br>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸದಾಗಿ ರಚಿಸಲಾದ ಮುಲ್ಕಿ ಮತ್ತು ಉಳ್ಳಾಲ ತಾಲ್ಲೂಕುಗಳಲ್ಲಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆಯು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಇ) | ಜಿಲ್ಲೆಯಲ್ಲಿ ನ್ಯಾಯಾಂಗ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದರಿಂದ ನ್ಯಾಯವನ್ನು ಪಡೆಯಲು ವಿಳಂಬವಾಗುತ್ತಿದೆ ಎಂಬ ದೂರು ಇದ್ದು, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಜಿಲ್ಲಾ ನ್ಯಾಯಾಂಗದಲ್ಲಿ ಗ್ರೂಪ್ 'ಸಿ' ಮತ್ತು 'ಡಿ' ನ ವಿವಿಧ ವೃಂದಗಳಲ್ಲಿ ವಯೋನಿವೃತ್ತಿ/ಸ್ವ ಇಚ್ಛಾ ನಿವೃತ್ತಿ/ಮರಣ/ವರ್ಗಾವಣೆ/ಬಡ್ತಿಯಿಂದಾಗಿ ದಿನಾಂಕ:30.09.2025 ರವರೆಗೆ ಒಟ್ಟು 1400 ಹುದ್ದೆಗಳು ಖಾಲಿ ಇರುತ್ತವೆ. ಈ ಹುದ್ದೆಗಳನ್ನು ಮುಖ್ಯ ನ್ಯಾಯಾಧೀಶರ ಅನುಮೋದನೆಯ ನಂತರ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆಯಾ ಜಿಲ್ಲೆಯ ಸಂಬಂಧಿತ ನೇಮಕಾತಿ ಪ್ರಾಧಿಕಾರಗಳಿಗೆ |

| | | |
|---|---|---|
| | | (ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು) ಕರ್ನಾಟಕ ಉಚ್ಚ ನ್ಯಾಯಾಲಯದಿಂದ ಅನುಮತಿ ನೀಡಲಾಗುವುದು. |

ಸಂಖ್ಯೆ: ಲಾ-ಎಲ್‌ಸಿಇ/22/2026 (ಭಾ-1)

(ಎಚ್.ಕೆ. ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು

ಎಚ್.ಕೆ ಪಾಟೀಲ
ಕಾನೂನು, ನ್ಯಾಯ, ಮಾನವ ಹಕ್ಕುಗಳು
ಸಂಸದೀಯ ವ್ಯವಹಾರಗಳು, ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು



le No. LAW-LCE/22/2026-ADMN1-LAW SEC-Part(1) (Computer No. 2115946)
enerated from eOffice by H K PATIL, MIN-LAW(HKP), MINISTER, MINISTER - LAW on 18/03/2026 12:56 PM